# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 08.10.2021 ರ
## ಸಭಾ ನಡುವಳಿ

ದಿನಾಂಕ: 08.10.2021 ರಂದು ಬೆಳ್ಳಿಗೆ 11.30 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪ ವಿಭಾಗ ಕಛೇರಿ, ದಾಸರಹಳ್ಳಿ, ಇಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಜಿ ದೇವರಾಜ್ | ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ) |
| 2 | ಶ್ರೀ ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 4 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ ವಾರ್ಡ್ ನಂ. 05 |
| 5 | ಆರ್.ಜೆ ಸೋಮಶೇಖರ್ | ವ್ಯವಸ್ಥಾಪಕರು, ಕಂದಾಯ ಶಾಖೆ, ಥಣಿಸಂದ್ರ |
| 6 | ಬಿ. ನಾಗೇಂದ್ರಪ್ಪ | ಎಸ್.ಡಿ.ಎ, ಕಂದಾಯ ಶಾಖೆ, ಥಣಿಸಂದ್ರ |
| 7 | ಶ್ರೀನಿವಾಸಮೂರ್ತಿ ಎಂ. | ವಿದ್ಯುತ್ ಶಾಖೆ, ಬಿಬಿಎಂಪಿ |
| 8 | ಹೆಚ್. ಅನೀಲ್ | ಕಿರಿಯ ಆರೋಗ್ಯ ಪರಿವೀಕ್ಷಕರು |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. **ಕೋವಿಡ್–19ರ ಸಂಬಂಧ ಮುಜಾಗೃತ ಕ್ರಮಗಳ ಬಗ್ಗೆ.** ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ವೆಂಕಟೇಶ್ ರವರು ಮಾತನಾಡಿ ಕೋವಿಡ್–19ರ ಸೊಂಕು ತಗಲಿ ಮರಣ ಹೊಂದಿರುವ ಕುಟುಂಬದ ಮುಖ್ಯಸ್ಥರಿಗೆ ಬಿ.ಪಿ.ಎಲ್ ಕಾರ್ಡ್ ಹೊಂದಿದ್ದರೆ ರೂ. 1.00 ಲಕ್ಷ ಹಾಘೂ ಎ.ಪಿ.ಎಲ್ ಕಾರ್ಡ್ ಹೊಂದಿದ್ದರೆ 50 ಸಾವಿರ ರೂ ಗಳ ಸಹಾಯಧನವನ್ನು ನೀಡಲಾಗುವುದು ಇದರಿಂದ ಕೋವಿಡ್ ಸೊಂಕಿಗೆ ತುತ್ತಾಗಿ ಮರಣ ಹೊಂದಿರುವವರ ವಾರಸ್ಸುದಾರರಿಗೆ ಅನುಕೂಲವಾಗುವಂತೆ ಯೋಜನೆಯ ಉಪಯೋಗ ಪಡಿಸಿಕೊಳ್ಳಲು ವಾರ್ಡ್ ವ್ಯಾಪ್ತಿಯಲ್ಲಿ ಪ್ರಚಾರ ಮಾಡುವಂಥೆ ಎಂದು ಸಭೆಗೆ ತಿಳಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿರುವ ಸಾರ್ವಜನಿಕರು ವ್ಯಾಕ್ಸೀನೇಷನ್ ಅನ್ನು ಕಡ್ಡಾಯವಾಗಿ ತೆಗೆದುಕೊಳ್ಳುವಂತೆ ಪ್ರಚಾರ ಮಾಡಿ ವ್ಯಾಕ್ಸೀನೇಷನ್ ನೂರಕ್ಕೆ ನೂರರಷ್ಟು ಪ್ರಗತಿ ಸಾಧಿಸಬೇಕೆಂದು ಸಭೆಗೆ ತಿಳಿಸಿದರು.



Scanned by CamScanner

3. ವಾರ್ಡ್ ವ್ಯಾಪ್ತಿಯ ರಸ್ತೆ ಬದಿಯಲ್ಲಿ ಸಾರ್ವಜನಿಕರು ಅಡ್ಡಾದಿಡ್ಡಿಯಾಗಿ ಬಿಸಾಡಿರುವ ಕಸವನ್ನು ತೆಗೆದು ಸುಂದರೀಕರಿಸಲು ಬೇಕಾದ ಎಲ್ಲಾ ಸಾಮಗ್ರಿಗಳನ್ನು ನೀಡುವಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಭಿಯಂತರರಿಗೆ ಸೂಚಿಸಲು ಕೋರಿದರು.
4. ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ಸ್ಪಾಟ್‌ಗಳೂ ಹೆಚ್ಚಾಗುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಪ್ರಚಾರ ಮಾಡಿ ಬ್ಲಾಕ್ ಸ್ಪಾಟ್‌ಗಳಲ್ಲಿ ಕಸವನ್ನು ಬಿಸಾಡದಂತೆ ಎಚ್ಚರಿಕೆ ಹಾಗೂ ದಂಡ ವಿಧಿಸುವುದಾಗಿ ಪ್ರಚಾರ ಮಾಡಲು ಸಭೆಯಲ್ಲಿ ತಿಳಿಸಲಾಯಿತು.
5. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಕೊರೆದಿರುವ ಕೊಳವೆ ಬಾವಿಗಳನ್ನು ನಿರ್ವಹಣೆಗೆ ಹಸ್ತಾಂತರಿಸಿಕೊಳ್ಳುವಂತೆ ಕ್ರಮ ವಹಿಸಲು ಕೊರಲಾಯಿತು.
6. ಸಾರ್ವಜನಿಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ತೆರೆದ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ಹೊರಸಾಗಿಸಲು ಕ್ರಮ ವಹಿಸಲು ಕೋರಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್–19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾನುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಸಂಬಧಪಟ್ಟ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಕಾರ್ಯದರ್ಶಿಯವರಿಗೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.

Scanned by CamScanner